# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರೈತರಿಗೆ ಉತ್ತಮ ಗುಣಮಟ್ಟದ ಕೃಷಿ ಪರಿಕರಗಳನ್ನು ಒದಗಿಸಲು ಜಿಲ್ಲಾ ಮಟ್ಟದಲ್ಲಿ ಉಸ್ತುವಾರಿ ಸಮಿತಿ ರಚಿಸುವ ಬಗ್ಗೆ.

ಓದಲಾಗಿದೆ: 1. ಕೃಷಿ ಆಯುಕ್ತರ ಏಕಕಡತ ಸಂ: ರಗೊಪ/ಪ.ಕಾ.ಜಿ.ಉ.ಸಮಿತಿ/1/ 2019-20, ದಿನಾಂಕ 01.06.2019.

**ಪ್ರಸ್ತಾವನೆ:**

ಮೇಲೆ (1) ರಲ್ಲಿ ಓದಲಾದ ಕೃಷಿ ಆಯುಕ್ತರ ಏಕಕಡತದಲ್ಲಿ, ಬೀಜ ಕಾಯ್ದೆ 1966, ರಸಗೊಬ್ಬರ (ರಾಸಾಯನಿಕ, ಸಾವಯವ ಮತ್ತು ಮಿಶ್ರಣ) ನಿಯಂತ್ರಣಾ ಆದೇಶ 1985. ಕೀಟನಾಶಕ ಕಾಯ್ದೆ 1968 ಗಳನ್ವಯ ರೈತರಿಗೆ ಉತ್ತಮ ಗುಣಮಟ್ಟದ ಬಿತ್ತನೆ ಬೀಜಗಳು. ರಸಗೊಬ್ಬರ ಹಾಗೂ ಕೀಟನಾಶಕಗಳನ್ನು ಒದಗಿಸುವುದು ಉದ್ದೇಶವಾಗಿದ್ದು, ಈ ಕಾಯ್ದೆಗಳಡಿ ಕೃಷಿ ಇಲಾಖೆಯ ಅಧಿಕಾರಿಗಳು ಮಾದರಿಗಳನ್ನು ತೆಗೆದು ಅಧಿಸೂಚಿತ ಪ್ರಯೋಗಾಲಯಗಳಿಂದ ವಿಶ್ಲೇಷಣೆ ಮಾಡಿಸಲು ಅವಕಾಶಗಳಿರುತ್ತವೆ. 2016-17 ರಿಂದ ಮಾದರಿಗಳನ್ನು ತೆಗೆದು ವಿಶ್ಲೇಷಣೆಗೆ ಒಳಪಡಿಸುವಲ್ಲಿ, ವಿಶ್ಲೇಷಿತ ವರದಿಯನ್ವಯ ಕಳಪೆ/ಕಡಿಮೆ ಗುಣಮಟ್ಟವೆಂದು ಕಂಡು ಬಂದ ಮಾದರಿಗಳ ಮೇಲೆ ಆಡಳಿತಾತ್ಮಕ ಮತ್ತು ಕಾನೂನು ರೀತ್ಯಾ ಕ್ರಮ ಕೈಗೊಳ್ಳುವುದರಲ್ಲಿ ಕೊರತೆ ಕಂಡುಬಂದಿರುತ್ತದೆ. ಆದ್ದರಿಂದ ರೈತರಿಗೆ ಉತ್ತಮ ಗುಣಮಟ್ಟದ ಕೃಷಿ ಪರಿಕರಗಳನ್ನು ಒದಗಿಸುವ ಸಲುವಾಗಿ ಮಾದರಿಗಳನ್ನು ವಿಶ್ಲೇಷಣೆಗೆ ಒಳಪಡಿಸುವುದು ಹಾಗೂ ಮುಂದಿನ ಕಾನೂನಿನ ಕ್ರಮ ಕೈಗೊಂಡು ಮೇಲೆ ತಿಳಿಸಿರುವ ಕಾಯ್ದೆಗಳನ್ನು ಸೂಕ್ತ ರೀತಿಯಲ್ಲಿ ನಿಗದಿತ ಸಮಯದೊಳಗೆ ಅನುಷ್ಠಾನಗೊಳಿಸಲು ಅನುವಾಗುವಂತೆ ಜಿಲ್ಲಾ ಮಟ್ಟದಲ್ಲಿ ನಿಯಮಿತವಾಗಿ ಉಸ್ತುವಾರಿ ಮಾಡಲು ಜಿಲ್ಲಾ ಮಟ್ಟದ ಸಮಿತಿಯ ಅಗತ್ಯವಿರುತ್ತದೆಂದು ಕೆಳಕಂಡಂತೆ ಜಿಲ್ಲಾ ಮಟ್ಟದ ಉಸ್ತುವಾರಿ ಸಮಿತಿಯನ್ನು ರಚಿಸಿ ಸರ್ಕಾರದ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

| | |
|---|---|
| 1) ಜಿಲ್ಲಾಧಿಕಾರಿಗಳು | ಅಧ್ಯಕ್ಷರು |
| 2) ಜಂಟಿ ಕೃಷಿ ನಿರ್ದೇಶಕರು | ಸದಸ್ಯರು |
| 3) ಉಪ ನಿರ್ದೇಶಕರು (ತೋಟಗಾರಿಕೆ ಇಲಾಖೆ) | ಸದಸ್ಯರು |
| 4) ಉಪ ಕೃಷಿ ನಿರ್ದೇಶಕರು-2 | ಸದಸ್ಯರು |
| 5) ಜಿಲ್ಲಾ ಸರ್ಕಾರಿ ಅಭಿಯೋಜಕರು | ಸದಸ್ಯರು |
| 6) ಉಪ ವಿಭಾಗಾಧಿಕಾರಿಗಳು, ಕಂದಾಯ ಇಲಾಖೆ | ಸದಸ್ಯರು |
| 7) ಉಪ ಕೃಷಿ ನಿರ್ದೇಶಕರು-1 | ಸದಸ್ಯ ಕಾರ್ಯದರ್ಶಿ |

ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ರೈತರಿಗೆ ಪೂರೈಕೆಯಾಗುತ್ತಿರುವ ಕೃಷಿ ಪರಿಕರಗಳ ಗುಣಮಟ್ಟ ಖಾತ್ರಿಪಡಿಸಲು ಅನುಷ್ಠಾನಗೊಳಿಸುತ್ತಿರುವ ಬೀಜ ಕಾಯ್ದೆ, 1966, ರಸಗೊಬ್ಬರ (ರಾಸಾಯನಿಕ, ಸಾವಯವ ಮತ್ತು ಮಿಶ್ರಣ) ನಿಯಂತ್ರಣ ಆದೇಶ 1985, ಕೀಟನಾಶಕ ಕಾಯ್ದೆ, 1968 ಗಳಡಿ ಕೈಗೊಳ್ಳುತ್ತಿರುವ ಕಾನೂನು ಕ್ರಮಗಳನ್ನು ತ್ವರಿತವಾಗಿ ನಿರ್ವಹಿಸಲು ಜಿಲ್ಲಾ ಮಟ್ಟದ ಉಸ್ತುವಾರಿ ಸಮಿತಿಯನ್ನು ರಚಿಸಲು ಹಾಗೂ ಈ ಸಮಿತಿಯ ಸದಸ್ಯ ಕಾರ್ಯದರ್ಶಿಯನ್ನಾಗಿ ಆಯಾ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರನ್ನು ನೇಮಿಸಲು ತೀರ್ಮಾನಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: AGRI-ACT/32/2019, ಬೆಂಗಳೂರು, ದಿನಾಂಕ 28.06.2019**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಬೀಜ ಕಾಯ್ದೆ 1966, ರಸಗೊಬ್ಬರ (ರಾಸಾಯನಿಕ, ಸಾವಯವ ಮತ್ತು ಮಿಶ್ರಣ) ನಿಯಂತ್ರಣಾ ಆದೇಶ 1985 ಕೀಟನಾಶಕ ಕಾಯ್ದೆ

..2)

1968ಗಳ ಅನುಷ್ಠಾನದ ಮೇಲ್ವಿಚಾರಣೆ ಮಾಡುವ ಸಲುವಾಗಿ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ಈ ಕೆಳಕಂಡಂತೆ ರಚಿಸಿ ಆದೇಶಿಸಿದೆ.

ಜಿಲ್ಲಾಮಟ್ಟದ ಕೃಷಿ ಪರಿಕರಗಳ ಉಸ್ತುವಾರಿ ಸಮಿತಿ:

| ಕ್ರ.ಸಂ. | ಹುದ್ದೆ | ಪದನಾಮ |
|---|---|---|
| 01 | ಜಿಲ್ಲಾಧಿಕಾರಿಗಳು | ಅಧ್ಯಕ್ಷರು |
| 02 | ಉಪ ನಿರ್ದೇಶಕರು (ತೋಟಗಾರಿಕೆ ಇಲಾಖೆ) | ಸದಸ್ಯರು |
| 03 | ಉಪ ಕೃಷಿ ನಿರ್ದೇಶಕರು-1 ಮತ್ತು 2 | ಸದಸ್ಯರು |
| 04 | ಜಿಲ್ಲಾ ಸರ್ಕಾರಿ ಅಭಿಯೋಜಕರು | ಸದಸ್ಯರು |
| 05 | ಉಪ ವಿಭಾಗಾಧಿಕಾರಿಗಳು, ಕಂದಾಯ ಇಲಾಖೆ | ಸದಸ್ಯರು |
| 06 | ಜಂಟಿ ಕೃಷಿ ನಿರ್ದೇಶಕರು | ಸದಸ್ಯ ಕಾರ್ಯದರ್ಶಿ |

ಸಮಿತಿಯ ಕರ್ತವ್ಯಗಳು:

1. ಸಮಿತಿಯು ಪ್ರತಿ ಎರಡು ತಿಂಗಳಿಗೊಮ್ಮೆ ಸಭೆ ಸೇರಿ ವಿವಿಧ ಕೃಷಿ ಪರಿಕರಗಳ ಕಾಯ್ದೆಗಳಡಿ ದಾಖಲಾಗಿರುವ ಪ್ರಕರಣಗಳ ಪ್ರಗತಿ ಪರಿಶೀಲಿಸುವುದು.
2. ತ್ವರಿತವಾಗಿ ಪ್ರಕರಣಗಳನ್ನು ವಿಲೇ ಮಾಡಲು ಸೂಕ್ತ ಸಲಹೆ ಸೂಚನೆಗಳನ್ನು ನೀಡುವುದು.
3. ಕಾನೂನಿನ ಬಗ್ಗೆ ಅರಿವು ಮೂಡಿಸುವ ಕ್ರಮಗಳನ್ನು ಕೈಗೊಳ್ಳುವುದು.
4. ಕಾಲಕಾಲಕ್ಕೆ ಅವಶ್ಯಕತೆಗನುಗುಣವಾಗಿ ಸಲಹೆ ಸೂಚನೆಗಳನ್ನು ನೀಡುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ
B S Nagarathnam
(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-1.
2. ಪ್ರಧಾನ ಮಹಾಲೇಖಪಾಲರು (ಇ&ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-1
3. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು
4. ಆಯುಕ್ತರು / ನಿರ್ದೇಶಕರು, ಕೃಷಿ/ತೋಟಗಾರಿಕೆ ಇಲಾಖೆ, ಬೆಂಗಳೂರು
5. ಆಯುಕ್ತರು / ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ
6. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು / ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್
7. ರಾಜ್ಯದ ಎಲ್ಲಾ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು / ಉಪ ಕೃಷಿ ನಿರ್ದೇಶಕರು / ಸಹಾಯಕ ಕೃಷಿ ನಿರ್ದೇಶಕರು.
8. ಕಂದಾಯ ಇಲಾಖೆಯ ಎಲ್ಲಾ ಉಪವಿಭಾಧಿಕಾರಿಗಳು
9. ರಾಜ್ಯದ ಎಲ್ಲಾ ಜಿಲ್ಲಾ ಸರ್ಕಾರಿ ಅಭಿಯೋಜಕರು
10. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು (ತೋಟಗಾರಿಕೆ ಇಲಾಖೆ)
11. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ-4)
12. ಮಾನ್ಯ ಕೃಷಿ ಸಚಿವರವರ ಆಪ್ತ ಕಾರ್ಯದರ್ಶಿಗಳು
13. ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು.
14. ಸರ್ಕಾರದ ಉಪ ಕಾರ್ಯದರ್ಶಿ-1 & 2 ರವರ ಆಪ್ತ ಸಹಾಯಕರು, ಕೃಷಿ ಇಲಾಖೆ, ಬೆಂಗಳೂರು.
15. ಶಾಖಾ ರಕ್ಷ ಕಡತ / ಹೆಚ್ಚುವರಿ ಪ್ರತಿಗಳು.

(ಕ್ರಮ ಸಂಖ್ಯೆ: 6, 7, 8, 9 ಹಾಗೂ 10 ಕ್ಕೆ ಕೃಷಿ ಆಯುಕ್ತರವರ ಮೂಲಕ)